ಕಲ್ಪಿಸಲಾಗಿದೆ. ಇತರೆ ವೃಂದದ ಹುದ್ದೆಗಳಿಗೆ ಈ ವಿನಾಯಿತಿ ನೀಡಲಾಗಿಲ್ಲ. ಪ್ರಸ್ತುತ ಕೋವಿಡ್-19ರ ಹಿನ್ನೆಲೆಯಲ್ಲಿ ತಾತ್ಕಾಲಿಕವಾಗಿ ನೇರ ನೇಮಕಾತಿ ಮುಖೇನ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆಯನ್ನು ತಡೆಹಿಡಿಯಾಗಿರುವುದರಿಂದ, ಇದನ್ನು ತೆರವುಗೊಳಿಸಿದ ಕೂಡಲೇ ಹೈ-ಕ ವೃಂದದ ಖಾಲಿ ಹುದ್ದೆಗಳನ್ನು ಭರ್ತಿಮಾಡಲು ಕ್ರಮವಹಿಸಲಾಗುವುದು.

ಅನುಚ್ಛೇಧ 371ಜೆ ರಡಿ ಸ್ಥಳೀಯ ವ್ಯಕ್ತಿಗಳಿಗೆ ಮೀಸಲಿರಿಸಿರುವ ನೇರ ನೇಮಕಾತಿ ಹುದ್ದೆಗಳ ಎದುರಾಗಿ ಕೇವಲ ಸ್ಥಳೀಯ ವ್ಯಕ್ತಿಗಳಿಂದಲೇ ಭರ್ತಿ ಮಾಡಲಾಗುತ್ತಿದೆ. ಇದಲ್ಲದೇ ಹೈದ್ರಾಬಾದ್-ಕರ್ನಾಟಕದ ಸ್ಥಳೀಯ ಪ್ರದೇಶದ ಹುದ್ದೆಗಳ ನೇಮಕಾತಿಯಲ್ಲಿ ಹಾಗೂ ರಾಜ್ಯ ಮಟ್ಟದ ನೇಮಕಾತಿಗಳಲ್ಲಿ ಸ್ಥಳೀಯ ವ್ಯಕ್ತಿಗಳಿಗೆ ಹೈ-ಕ ಸ್ಥಳೀಯ ಪ್ರದೇಶಕ್ಕೆ ಮೀಸಲಾದ ಹುದೆಗಳ ಜೊತೆಗೆ ಮಿಕ್ಕುಳಿದ ವೃಂದದ ನೇರ ನೇಮಕಾತಿ ಹುದ್ದೆಗಳಿಗೂ ಸಹ ನೇಮಕಾತಿ ಹೊಂದಲು ವಿಶೇಷ ಅವಕಾಶ ಕಲ್ಪಿಸಲಾಗಿದೆ, ಇದರಿಂದ ಸ್ಥಳೀಯ ವ್ಯಕ್ತಿಗಳು ಸ್ಥಳೀಯ ವೃಂದವೂ ಸೇರಿದಂತೆ  ಇತರೆ ವೃಂದದಲ್ಲಿಯೂ ಸಹ ಹೆಚ್ಚಿನ ಸಂಖ್ಯೆಯಲ್ಲಿ ಆಯ್ಕೆಯಾಗುತ್ತಿದ್ದಾರೆ. ಬಡ್ತಿ ಕೋಟಾದಲ್ಲಿ ಸ್ಥಳೀಯ ವೃಂದದ ಹುದ್ದೆಗಳನ್ನು ಸ್ಥಳೀಯ ವೃಂದದ ವ್ಯಕ್ತಿಗಳಿಂದಲೇ ಭರ್ತಿ ಮಾಡಲಾಗುತ್ತಿದೆ. ಇತರೆಯವರಿಗೆ ಅವಕಾಶವಿರುವುದಿಲ್ಲ, ಹೀಗಾಗಿ ಸ್ಥಳೀಯ ವ್ಯಕ್ತಿಗಳನ್ನು ಕಡೆಗಣಿಸಲಾಗುತ್ತಿಲ್ಲ.

ಅನುಚ್ಛೇಧ 371ಜೆ ರನ್ವಯ ಮೀಸಲಿರಿಸಿರುವ ಸ್ಥಳೀಯ ವೃಂದದಲ್ಲಿ ನೇರ ನೇಮಕಾತಿಗೆ ಮತ್ತು ಬಡ್ತಿ ಕೋಟಾದಲ್ಲಿ ಬಡ್ತಿಗೆ ಬಾಕಿಯಿರುವ ಹುದ್ದೆಗಳ ನೇಮಕಾತಿಗೆ ಇರುವ ಆಡಳಿತಾತ್ಮಕ ತೊಡಕುಗಳನ್ನು ನಿವಾರಿಸಿ ಹುದ್ದೆಗಳನ್ನು ತ್ವರಿತವಾಗಿ ಭರ್ತಿ ಮಾಡುವ ಕುರಿತು ಸರ್ಕಾರದ ಮುಖ್ಯ ಕಾರ್ಯದರ್ಶಿಯವರು ನಿಯಮಿತವಾಗಿ ಎಲ್ಲಾ ಇಲಾಖೆಗಳ ಕಾರ್ಯದರ್ಶಿ ಹಾಗೂ ಇಲಾಖಾ ಮುಖ್ಯಸ್ಥರೊಂದಿಗೆ ಪ್ರಗತಿ ಪರಿಶೀಲನಾ ಸಭೆಯನ್ನು ನಡೆಸುತ್ತಿದ್ದಾರೆ. ಇದರಿಂದ ಖಾಲಿ ಹುದ್ದೆಗಳನ್ನು ನಿಗಧಿತ ಕಾಲಮಿತಿಯಲ್ಲಿ ಭರ್ತಿ ಮಾಡಲು ಸಾಧ್ಯವಾಗುತ್ತಿದೆ.

ಶೈಕ್ಷಣಿಕ ಸಂಸ್ಥೆಗಳ ಪ್ರವೇಶದಲ್ಲಿ ಮೀಸಲಾತಿಗೆ ಸಂಬಂಧಿಸಿದಂತೆ ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿ ಪ್ರವೇಶ ನಿಯಂತ್ರಣ) ಆದೇಶ, 2013 ಮತ್ತು ಕನಾಟಕ ಖಾಸಗಿ ಅನುದಾನರಹಿತ ಶೈಕ್ಷಣಿಕ ಸಂಸ್ಥೆಗಳ (ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿ

ಪ್ರವೇಶ ನಿಯಂತ್ರಣ) ಆದೇಶ, 2013ನ್ನು ಹೊರಡಿಸಲಾಗಿದ್ದು, ಸದರಿ ಆದೇಶದನ್ವಯ ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿರುವ ವಿಶ್ವ ವಿದ್ಯಾಲಯಗಳು ಮತ್ತು ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ನಾತಕೋತ್ತರ ಪದವಿವರೆಗಿನ ಕೋರ್ಸುಗಳಲ್ಲಿ ಹಾಗೂ ವೃತ್ತಿಪರ ಕೋರ್ಸುಗಳಲ್ಲಿನ ಸೀಟುಗಳಲ್ಲಿ ಶೇ 70%ರಷ್ಟು ಸೀಟುಗಳನ್ನು ಹೈ-ಕ ಪ್ರದೇಶದ ಸ್ಥಳೀಯ ವ್ಯಕ್ತಿಗಳಿಗೆ ಮೀಸಲಿರಿಸಲು ಅವಕಾಶ ಕಲ್ಪಿಸಲಾಗಿದೆ. ಅದೇ ರೀತಿ ರಾಜ್ಯ ಮಟ್ಟದ ವಿಶ್ವವಿದ್ಯಾಲಯಗಳಲ್ಲಿ ಮತ್ತು ಶೈಕ್ಷಣಿಕ ಸಂಸ್ಥೆಗಳಲ್ಲಿನ ಸೀಟುಗಳಲ್ಲಿ ಶೇ 8 ರಷ್ಟು ಸೀಟುಗಳನ್ನು ಹೈ-ಕ ಪ್ರದೇಶದ ಸ್ಥಳೀಯ ವ್ಯಕ್ತಿಗಳಿಗೆ ಮೀಸಲಿರಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. ಹೈ-ಕ ಪ್ರದೇಶದ ಸ್ಥಳೀಯ ವಿದ್ಯಾರ್ಥಿಗಳು ಮೇಲ್ಕಾಣಿಸಿದಂತೆ ಮೀಸಲಿರಿಸಿದ ಸೀಟುಗಳ ಹೊರತಾಗಿ ಇತರೆ ಸೀಟುಗಳಲ್ಲಿಯೂ ಸಹ ಪ್ರವೇಶ ಪಡೆಯಲು ಅವಕಾಶಗಳಿರುತ್ತವೆ. ಇದರಿಂದ ಹೈ-ಕ ಪ್ರದೇಶದ ಸ್ಥಳೀಯ ವಿದ್ಯಾರ್ಥಿಗಳಿಗೆ ಶೈಕ್ಷಣಿಕವಾಗಿ ಹೆಚ್ಚಿನ ಅವಕಾಶ ಕಲ್ಪಿಸಲಾಗುತ್ತಿದೆ.

**ಸಂಖ್ಯೆ: ಸಿಆಸುಇ 61 ಹೈಕಕೋ 2021**

(ಬಿ. ಎಸ್. ಯಡಿಯೂರಪ್ಪ)
ಮುಖ್ಯಮಂತ್ರಿಗಳು